ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ

ದಿನಾಂಕ : DATE : 1/7/2020

# ಕಾಂಗ್ರೆಸ್ ಮುಖಂಡರ ವಿರುದ್ಧ ಎಫ್ಐಆರ್

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು 1/7/20

ನಿಷೇಧಾಜ್ಞೆ ಉಲ್ಲಂಘಿಸಿದ ಹಾಗೂ ಅನುಮತಿ ಪಡೆಯದೆ ಪ್ರತಿಭಟನೆ ನಡೆಸಿದ್ದಾರೆ ಎಂದು ಕಾಂಗ್ರೆಸ್ ಮುಖಂಡರ ವಿರುದ್ಧ ವಿಧಾನಸೌಧ ಠಾಣೆಯಲ್ಲಿ ಮಂಗಳವಾರ ಎಫ್ಐಆರ್ ದಾಖಲಿಸಲಾಗಿದೆ.

» ಕೆಪಿಸಿಸಿ ಕಾರ್ಯಾಧ್ಯಕ್ಷ ಸಲೀಂ ಅಹಮ್ಮದ್ ಹೆಸರು ಮಾತ್ರ ಉಲ್ಲೇಖ

» ವಿಧಾನಸೌಧ ಠಾಣೆಯಲ್ಲಿ ಪ್ರಕರಣ ದಾಖಲು

ಇಂಧನ ಬೆಲೆ ಏರಿಕೆ ವಿರೋಧಿಸಿ ಸೋಮವಾರ ಕಾಂಗ್ರೆಸ್ ಮುಖಂಡರು ಕ್ವೀನ್ ರಸ್ತೆ ಕಡೆಯಿಂದ ಕಬ್ಬನ್‌ಪಾರ್ಕ್ ಮೆಟ್ರೋ ನಿಲ್ದಾಣದವರೆಗೆ ಸೈಕಲ್ ಜಾಥಾ ನಡೆಸಿದ್ದರು. ಕೋವಿಡ್ ಹಿನ್ನೆಲೆಯಲ್ಲಿ ನಗರದಲ್ಲಿ ನಿಷೇಧಾಜ್ಞೆ ಇದ್ದರೂ ಸೈಕಲ್, ಟೆಂಪೋ, ಆಟೋರಿಕ್ಷಾ, ಜಟಕಾಬಂಡಿ ಮೂಲಕ ರ್‍ಯಾಲಿ ನಡೆಸಿದರು. ಆ ನಂತರ ರಸ್ತೆಬದಿ ವಾಹನ ನಿಲ್ಲಿಸಿ ಭಾಷಣ ಮಾಡಿದರು. ಇದರಿಂದ ಸಾರ್ವಜನಿಕರ ಸಂಚಾರಕ್ಕೆ ಅಡ್ಡಿ ಹಾಗೂ ಅಪಾಯ ಉಂಟಾಗಿದೆ ಎಂಬ ಆರೋಪದ ಮೇಲೆ ವಿಧಾನಸೌಧ ಠಾಣೆಗೆ ಕರ್ತವ್ಯನಿರತ ಪೊಲೀಸ್ ಅಧಿಕಾರಿ ದೂರು ನೀಡಿದ್ದರು. ಈ ಮೇರೆಗೆ ಕೆಪಿಸಿಸಿ ಕಾರ್ಯಾಧ್ಯಕ್ಷ ಸಲೀಂ ಅಹಮದ್ ಮತ್ತು ಇತರರ ವಿರುದ್ಧ ಎಫ್ಐಆರ್ ದಾಖಲಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

**ಮುಖಂಡರ ಹೆಸರೇ ಇಲ್ಲ:** ಕಾಂಗ್ರೆಸ್ ಪ್ರತಿಭಟನೆ ವಿರುದ್ಧ ದಾಖಲಾಗಿರುವ ಎಫ್ಐಆರ್‌ನಲ್ಲಿ ವಿಧಾನಸಭೆ ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ, ರಾಜ್ಯಸಭಾ ಸದಸ್ಯ ಮಲ್ಲಿಕಾರ್ಜುನ ಖರ್ಗೆ, ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್, ಕಾರ್ಯಾಧ್ಯಕ್ಷರಾದ ಸತೀಶ್ ಜಾರಕಿಹೊಳಿ ಹಾಗೂ ಈಶ್ವರ ಖಂಡ್ರೆ ಸೇರಿ ಹಲವು ಪ್ರಮುಖರ ಹೆಸರುಗಳು ಉಲ್ಲೇಖವಾಗಿಲ್ಲ. ಅಲ್ಲದೆ, ಕರೊನಾ ಸೋಂಕು ನಿಯಂತ್ರಣ ಸಲುವಾಗಿ ಜಾರಿಗೆ ತಂದಿರುವ ರಾಷ್ಟ್ರೀಯ ವಿಪತ್ತು ನಿಯಂತ್ರಣಾ ಕಾಯ್ದೆ ಸೆಕ್ಷನ್‌ಗಳನ್ನು ಉಲ್ಲೇಖಿಸಿಲ್ಲ. ಪ್ರತಿಭಟನೆಯಲ್ಲಿ ನೂರಾರು ಜನರು ಜಮಾಯಿಸಿದ್ದರು. ವ್ಯಕ್ತಿಗತ ಅಂತರ, ಮಾಸ್ಕ್ ಬಳಕೆ ಮಾಡಿರಲಿಲ್ಲ. ಈ ಬಗ್ಗೆ ದೂರಿನಲ್ಲಿ ಉಲ್ಲೇಖವಾಗದೆ ಇರುವುದು ಅನುಮಾನಕ್ಕೆ ಎಡೆ ಮಾಡಿಕೊಟ್ಟಿದೆ.



**ಜನಪರ ಹೋರಾಟ ಮಾಡಿದವರ ಮೇಲೆ ಕೇಸ್ ಹಾಕಿದ್ದಾರೆ. ಇದು ಸಹಜವಾಗಿ ಅಚ್ಚರಿಯನ್ನುಂಟು ಮಾಡಿದೆ. ನಾವೇನು ಮಾಡಬೇಕು ಅನ್ನುವುದನ್ನು ಮುಂದೆ ಸರ್ಕಾರವೇ ಹೇಳಲಿ. ನಾವು ಮೊದಲಿಂದಲೂ ಸಪೋರ್ಟ್ ಮಾಡಿದ್ದೇವೆ. ಅದರೂ ಈಗ ಕೇಸ್ ಹಾಕಿದ್ದಾರೆ. ಅದನ್ನು ಎದುರಿಸುತ್ತೇವೆ ಹೊರತು ಹೆದರೋಲ್ಲ.**

**| ಡಿ.ಕೆ. ಸುರೇಶ್ ಸಂಸದ**